ಕ್ರೀಡಾಂಗಣವನ್ನು ಅಭಿವೃದ್ಧಿ ಪಡಿಸುವುದು

2040 (2365); ಡಾ॥ ರಫೀಕ್ ಅಹ್ಮದ್ ಎಸ್. (ತುಮಕೂರು ನಗರ)

ಅ) ತುಮಕೂರು ನಗರದಲ್ಲಿರುವ ಮಹಾತ್ಮ ಗಾಂಧಿ ಕ್ರೀಡಾಂಗಣವನ್ನು ನವೀಕರಿಸಿ ಸಿಂಥೆಟಿಕ್ ಟರ್ಫ್ ಹಾಕುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಕೆ. ಅಭಯಚಂದ್ರ (ಮಾನ್ಯ ಯುವಜನ ಸೇವಾ ಹಾಗೂ ಮೀನುಗಾರಿಕೆ ಸಚಿವರು)

ಅ) ತುಮಕೂರು ನಗರದಲ್ಲಿರುವ ಮಹಾತ್ಮ ಗಾಂಧಿ ಕ್ರೀಡಾಂಗಣವನ್ನು ನವೀಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ. ಆದರೆ ಸಿಂಥೆಟಿಕ್ ಟರ್ಫ್ ಹಾಕುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಕ್ರೀಡಾಂಗಣವನ್ನು ನವೀಕರಿಸುವ ಕಾಮಗಾರಿಯನ್ನು 2015–16 ನೇ ಸಾಲಿನಲ್ಲಿ ಪ್ರಾರಂಭಿಸಲಾಗುವುದು.

ಪ್ರಗತಿಯಲ್ಲಿರುವ ಯೋಜನೆಗಳು

2041 (2583); ಡಾ॥ ಕೆ. ಸುಧಾಕರ್

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಸಣ್ಣ ನೀರಾವರಿ ಇಲಾಖೆಯ ಯೋಜನೆಗಳು ಯಾವುವು;

ಆ) ಈ ಯೋಜನೆಗಳಿಗೆ ಮಾಡುತ್ತಿರುವ ವೆಚ್ಚವೆಷ್ಟು; ಯೋಜನೆಯ ಕಾರ್ಯ ಪ್ರಗತಿ ಏನಿದೆ; ಇದಕ್ಕಾಗಿ ಮೀಸಲಿಟ್ಟ ಹಣ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)